ಸಾಕ್ಷಿಗೆ ಕ್ರಮಬದ್ಧವಾಗಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿ ಪರ ಶ್ರೀ ಎಸ್ ಪಿ ವಕೀಲರಿಂದಃ-

ನಾನು ಈಗ ಹಾಜರುಪಡಿಸಿದ ಪ್ರಮಾಣ ಪತ್ರವನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಲು ಕೋರುತ್ತೇನೆ. ಪ್ರಮಾಣ ಪತ್ರದಲ್ಲಿನ ಎಲ್ಲಾ ಅಂಶಗಳು ಸತ್ಯವಾಗಿವೆ ಮತ್ತು ಅದರಲ್ಲಿ ನನ್ನ ಸಹಿ ಇರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ.

ವಂಶವೃಕ್ಷವನ್ನು ನಿಪಿ-1 ಎಂದು, ದಾವಾ ಆಸ್ತಿಗೆ ಸಂಬಂಧಪಟ್ಟ ಪಹಣಿಗಳನ್ನು ಹಾಜರು ಮಾಡಿದ್ದು ಅವುಗಳನ್ನು ಕ್ರಮವಾಗಿ ನಿಪಿ-2 ರಿಂದ ನಿಪಿ-14 ಎಂದು, ಅಸಲು ದಾವಾ ಸಂಖ್ಯೆ:302/1993 ರ ತೀರ್ಪು ಮತ್ತು ಡಿಕ್ರಿಯನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-15 ಎಂದು, ಅಸಲು ದಾವಾ ಸಂಖ್ಯೆ:500/2006 ರ ದಾವೆಯ ಸಾಕ್ಷಿ ಪ್ರಮಾಣ ಪತ್ರ, ಪಾಟೀ ಸವಾಲು, ತೀರ್ಪು ಮತ್ತು ಡಿಕ್ರಿಯನ್ನು ಹಾಜರು ಮಾಡಿದ್ದು ಅವುಗಳನ್ನು ಒಟ್ಟಾಗಿ ನಿಪಿ-16 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಪ್ರತಿವಾದಿ ಪರ ಶ್ರೀ ವಕೀಲರಿಂದಃ

ಪ್ರತಿವಾದಿಗಳು ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ಪ್ರತಿವಾದಿಗಳು ಲಿಖಿತ ಹೇಳಿಕೆ ಸಲ್ಲಿಸದ ಕಾರಣ ಈ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆ : ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ಬಹಿರಂಗ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಗಣಕೀಕರಿಸಿದೆ)
(ಸಾಕ್ಷಿಗೆ ಸಾಕ್ಷ್ಯವನ್ನು ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದ್ದಾರೆ)

(ಮಹೇಶ್ ಬಿ.ಟಿ)
ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,
ರಾಮನಗರ.